# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ | : | **1207** |
| ಸದಸ್ಯರ ಹೆಸರು | : | ಶ್ರೀ ನಿರಾಣಿ ಹಣಮಂತ ರುದ್ರಪ್ಪ (ಪದವೀಧರರ ಕ್ಷೇತ್ರ) |
| ಉತ್ತರಿಸಬೇಕಾದ ದಿನಾಂಕ | : | 22-08-2025. |
| ಉತ್ತರಿಸುವ ಸಚಿವರು | : | ಕೃಷಿ ಸಚಿವರು |

| | ಪ್ರಶ್ನೆ | ಉತ್ತರ |
|---|---|---|
| ಅ. | ರಾಜ್ಯದಲ್ಲಿ ಕೃಷಿ ವಿಶ್ವವಿದ್ಯಾಲಯಗಳನ್ನು ಮರು ಸಂಘಟಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು; (ವಿವರ ನೀಡುವುದು) | 2024-25ನೇ ಸಾಲಿನ ಆಯವ್ಯಯ ಘೋಷಣೆಯನ್ವಯ ಮಂಡ್ಯ ಜಿಲ್ಲೆಯ ವಿಶ್ವೇಶ್ವರಯ್ಯ ಚಾನಲ್ ಫಾರಂ (ವಿ.ಸಿ.ಫಾರಂ) ಇಲ್ಲಿ ನೂತನ ಕೃಷಿ ಮತ್ತು ತೋಟಗಾರಿಕೆ ವಿಜ್ಞಾನಗಳ ವಿಶ್ವವಿದ್ಯಾಲಯವನ್ನು ಸ್ಥಾಪಿಸುವ ಪ್ರಸ್ತಾವನೆಗೆ ಸಂಬಂಧಿಸಿದಂತೆ ದಿನಾಂಕ:13.01.2025 ರಂದು ನಡೆದ ಸಚಿವ ಸಂಪುಟ ಸಭೆಯಲ್ಲಿ ರಾಜ್ಯಾದ್ಯಂತ ಕೃಷಿ, ತೋಟಗಾರಿಕೆ, ಪಶುಸಂಗೋಪನೆ ಮತ್ತು ಅರಣ್ಯ ಕಾಲೇಜುಗಳನ್ನು ಮರು ಸಂಘಟಿಸಲು ತಜ್ಞರ ಸಮಿತಿಯನ್ನು ರಚಿಸುವಂತೆ ಸೂಚಿಸಲಾಗಿರುತ್ತದೆ.<br><br>ಅದರಂತೆ, ಸರ್ಕಾರದ ಆದೇಶ ಸಂಖ್ಯೆ: AGRI 11 AUB 2024, ದಿನಾಂಕ:25.03.2025 ರಲ್ಲಿ ಶ್ರೀ ಟಿ.ಎಂ. ವಿಜಯಭಾಸ್ಕರ್, ಭಾ.ಆ.ಸೇ, ನಿವೃತ್ತ ಮುಖ್ಯ ಕಾರ್ಯದರ್ಶಿಗಳು ಹಾಗೂ ಮಾಜಿ ಅಧ್ಯಕ್ಷರು, 2ನೇ ಆಡಳಿತ ಸುಧಾರಣಾ ಆಯೋಗ ಇವರ ಅಧ್ಯಕ್ಷತೆಯಲ್ಲಿ ಕೃಷಿ ತೋಟಗಾರಿಕೆ, ಪಶುಸಂಗೋಪನೆ ಮತ್ತು ಅರಣ್ಯ ಕಾಲೇಜುಗಳ ಮರುಸಂಘಟನೆ ಬಗ್ಗೆ ತಜ್ಞರ ಸಮಿತಿ (Re-organisation of Agricultural Universities) ಯನ್ನು ರಚಿಸಲಾಗಿದೆ. ಸಮಿತಿಯ ವರದಿಯನ್ನು ನಿರೀಕ್ಷಿಸಲಾಗಿದೆ. |
| ಆ. | ರಾಜ್ಯ ಸರ್ಕಾರವು ಸಮಗ್ರ ಕೃಷಿ ವಿಶ್ವವಿದ್ಯಾಲಯಗಳ ಸ್ಥಾಪನೆಯ ಕುರಿತಂತೆ ತಜ್ಞರ ಸಮಿತಿ ರಚಿಸಲಾಗಿದೆಯೇ: ರಚಿಸಿದಲ್ಲಿ, ಯಾವ ಕಾರಣಕ್ಕಾಗಿ ರಚಿಸಲಾಗಿದೆ; ಸದರಿ ಸಮಿತಿಯು ತನ್ನ ವರದಿಯನ್ನು ಸರ್ಕಾರಕ್ಕೆ ಸಲ್ಲಿಸಿದೆಯೇ; ಸಲ್ಲಿಸಿದ್ದಲ್ಲಿ, ಪ್ರತಿ ಒದಗಿಸುವುದು (ಈ ಕುರಿತು ಸಂಪೂರ್ಣ ಮಾಹಿತಿ ನೀಡುವುದು) | |
| ಇ | ಹಾಗಿದ್ದಲ್ಲಿ, ಕೃಷಿ ವಿಜ್ಞಾನಗಳ ವಿಶ್ವವಿದ್ಯಾಲಯ (ತಿದ್ದುಪಡಿ) ವಿಧೇಯಕ - 2025 ರಂತೆ ಕೃಷಿ ವಿಜ್ಞಾನಗಳ ಸಮಗ್ರ ಕೃಷಿ ವಿಶ್ವವಿದ್ಯಾಲಯಗಳ ಜೊತೆಗೆ ತೋಟಗಾರಿಕೆ ವಿಜ್ಞಾನಗಳ ವಿಶ್ವವಿದ್ಯಾಲಯವನ್ನು ಮರು ಸಂಘಟನೆಯಾಗಲಿ ಅಥವಾ ತೋಟಗಾರಿಕೆ ವಿಶ್ವವಿದ್ಯಾಲಯಗಳನ್ನು ಕೃಷಿ ವಿಶ್ವವಿದ್ಯಾಲಯಗಳ ವಿಧೇಯಕದಲ್ಲಿ ಸೇರಿಸುವುದಿಲ್ಲವೆಂದು ಈ ಹಿಂದೆ ನಡೆದ ಸದನದಲ್ಲಿ ಹೇಳಿರುವುದು ಸರ್ಕಾರದ ಗಮನದಲ್ಲಿದೆಯೇ; ಸರ್ಕಾರವೇ ಕೈಗೊಂಡ ತೀರ್ಮಾನಕ್ಕೆ ಇದು ವಿರುದ್ಧವಾಗುವುದಿಲ್ಲವೇ: | ಕೃಷಿ ವಿಜ್ಞಾನಗಳ ವಿಶ್ವವಿದ್ಯಾಲಯ (ತಿದ್ದುಪಡಿ) ವಿಧೇಯಕ, 2025 ರಲ್ಲಿ ನೂತನವಾಗಿ ಪ್ರಾರಂಭಿಸಲಾದ ಕೃಷಿ ವಿಜ್ಞಾನಗಳ ವಿಶ್ವವಿದ್ಯಾಲಯ ಮಂಡ್ಯವನ್ನು ಸೇರ್ಪಡಿಸಲಾಗಿರುತ್ತದೆ. ಸದರಿ ವಿಧೇಯಕದಲ್ಲಿ ತೋಟಗಾರಿಕೆ ವಿಜ್ಞಾನಗಳ ವಿಶ್ವವಿದ್ಯಾಲಯದ ವ್ಯಾಪ್ತಿಗೊಳಪಡುವ ಕಾಲೇಜುಗಳು, ಸಂಶೋಧನಾ ಸಂಸ್ಥೆಗಳು, ವಿಸ್ತರಣಾ ಶಿಕ್ಷಣ ಘಟಕಗಳು ಹಾಗೂ ಇತರೆ ಸಂಸ್ಥೆಗಳನ್ನು ಹೊರತುಪಡಿಸಿ, ವಿಧೇಯಕವನ್ನು ಜಾರಿಗೊಳಿಸಲಾಗಿರುತ್ತದೆ. |

| | | |
|---|---|---|
| | ಈ ಕುರಿತು ಸರ್ಕಾರ ತನ್ನ ಸ್ಪಷ್ಟ ನಿಲುವನ್ನು ತಿಳಿಸುವುದು ಮತ್ತು ಈ ಕುರಿತು ಸಂಪೂರ್ಣ ಮಾಹಿತಿ ನೀಡುವುದು; | ಅಲ್ಲದೆ, ಸದರಿ ಅಧಿನಿಯಮದಲ್ಲಿ ಕೃಷಿ, ಪಶುಸಂಗೋಪನೆ, ಮೀನುಗಾರಿಕೆ, ರೇಷ್ಮೆಕೃಷಿ, ಅರಣ್ಯಶಾಸ್ತ್ರ, ಇತರ ಕೃಷಿ ಸಂಬಂಧಿತ ವಿಷಯಗಳು ಮತ್ತು ತರಬೇತಿ ಅಥವಾ ಶೈಕ್ಷಣಿಕ ಕೇಂದ್ರಗಳ ನಿರ್ವಹಣೆ, ಕ್ಷೇತ್ರ ವಿಸ್ತರಣಾ ಕೆಲಸಗಾರರಿಗೆ ತರಬೇತಿ ಕಾರ್ಯಕ್ರಮಗಳು ಮತ್ತು ಸಂಶೋಧನೆ ಮತ್ತು ಪ್ರಾಯೋಗಿಕ ಕೇಂದ್ರಗಳು ಹಾಗೂ ಅದರ ಪ್ರಾದೇಶಿಕ ಅಧಿಕಾರ ಕ್ಷೇತ್ರ ವ್ಯಾಪ್ತಿಯೊಳಗಿನ ವಿವಿಧ ಭಾಗಗಳಲ್ಲಿ ಅಗತ್ಯಪಡಿಸಬಹುದಾದಂತಹ ಕೇಂದ್ರಗಳ ಸ್ಥಾಪನೆ, ಅಭಿವೃದ್ಧಿ ಮತ್ತು ಕಾರ್ಯಾಚರಣೆ ನಡೆಸುವ ಜವಾಬ್ದಾರಿ ಪ್ರತಿಯೊಂದು ವಿಶ್ವವಿದ್ಯಾಲಯದ್ದಾಗಿರತಕ್ಕದ್ದು ಎಂಬುದನ್ನು ಪ್ರತಿಯೋಜಿಸಲಾಗಿದೆ.<br><br>ದಿನಾಂಕ:13.01.2025 ರಂದು ನಡೆದ ಸಚಿವ ಸಂಪುಟ ಸಭೆಯಲ್ಲಿ ರಾಜ್ಯಾದ್ಯಂತ ಕೃಷಿ, ತೋಟಗಾರಿಕೆ, ಪಶುಸಂಗೋಪನೆ ಮತ್ತು ಅರಣ್ಯ ಕಾಲೇಜುಗಳನ್ನು ಮರು ಸಂಘಟಿಸಲು ತಜ್ಞರ ಸಮಿತಿಯನ್ನು ರಚಿಸುವಂತೆ ಸೂಚಿಸಿದ್ದು, ಅದರಂತೆ ಪ್ರಸ್ತುತ ಸಮಿತಿಯನ್ನು ರಚಿಸಲಾಗಿದ್ದು, ಸಮಿತಿಯು ನೀಡುವ ವರದಿಯಲ್ಲಿನ ಶಿಫಾರಸ್ಸುಗಳನ್ನು ನಿರೀಕ್ಷಿಸಲಾಗಿದೆ. |
| ಈ | ಯಾವ ಕಾಲಮಿತಿಯಲ್ಲಿ ತೋಟಗಾರಿಕೆ ವಿಜ್ಞಾನ ವಿಶ್ವವಿದ್ಯಾಲಯಗಳನ್ನು ಕೃಷಿ ವಿಶ್ವವಿದ್ಯಾಲಯಗಳ ವಿಧೇಯಕ ಹಾಗೂ ವ್ಯಾಪ್ತಿಯಿಂದ ಪ್ರತ್ಯೇಕಿಸಿ ತೋಟಗಾರಿಕೆ ವಿಜ್ಞಾನ ವಿಶ್ವವಿದ್ಯಾಲಯಗಳ ಸ್ಥಾಪನೆ ಕುರಿತು ಸೂಕ್ತ ಕ್ರಮ ಸರ್ಕಾರ ಕೈಗೊಳ್ಳುವುದೇ? (ವಿವರ ನೀಡುವುದು) | ಕೃಷಿ ವಿಜ್ಞಾನಗಳ ವಿಶ್ವವಿದ್ಯಾಲಯ (ತಿದ್ದುಪಡಿ) ವಿಧೇಯಕ, 2025 ರಲ್ಲಿ ತೋಟಗಾರಿಕೆ ವಿಜ್ಞಾನಗಳ ವಿಶ್ವವಿದ್ಯಾಲಯವನ್ನು ಹೊರತುಪಡಿಸಿ, ನೂತನವಾಗಿ ಪ್ರಾರಂಭಿಸಲಾದ ಕೃಷಿ ವಿಜ್ಞಾನಗಳ ವಿಶ್ವವಿದ್ಯಾಲಯ, ಮಂಡ್ಯವನ್ನು ಸೇರ್ಪಡಿಸ ಲಾಗಿರುತ್ತದೆ. |

AGRI 90 AUB 2025.

(ಎನ್. ಚಲುವರಾಯಸ್ವಾಮಿ)
ಕೃಷಿ ಸಚಿವರು